**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ 513 ಎಸಿಎಂ(2) 2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:13-08-2018.

## -:: ಸು ತ್ತೋಲೆ ::-

**ವಿಷಯ:** ರಾಜ್ಯದಲ್ಲಿ ಧಾರಕಾರವಾಗಿ ಮಳೆ ಸುರುಯುತ್ತಿರುವುದರಿಂದ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ದಿ:13-08-2018ರಂದು ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಿರುವುದರಿಂದ ಪ್ರಥಮ ಡಿಪ್ಲೋಮಾ ಪ್ರವೇಶ ಅವಧಿಯನ್ನು ಮುಂದೂಡಿರುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. ಡಿಟಿಇ/513/ಎಸಿಎಂ(2)/2017-18, ದಿ:05-05-2018.
2. ಈ ಕಛೇರಿ ಸುತ್ತೋಲೆ ಸಂ. ಡಿಟಿಇ/427/ಎಸಿಎಂ(2)/2016-17, ದಿ:18-07-2018 & ದಿ:01-08-2018.

-oooooo-

2018-19ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(2) ರ ದಿ:01-08-2018ರ ಸುತ್ತೋಲೆ ಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ದಿ:13-08-2018ರಂದು ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ಸೀಟುಗಳನ್ನು ರೋಸ್ಟರ್ ಅನುಗುಣವಾಗಿ ನಿಯಮಗಳನ್ನು ಪಾಲಿಸಿ ಆಯಾ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರ ಹಂತದಲ್ಲಿಯೇ ತುಂಬಲು ಅನುಮತಿ ನೀಡಲಾಗಿತ್ತು.

ಆದರೆ, ರಾಜ್ಯದಲ್ಲಿ ಧಾರಕಾರವಾಗಿ ಮಳೆ ಸುರುಯುತ್ತಿರುವ ಜಿಲ್ಲೆಗಳಲ್ಲಿ ಆಯಾ ಜಿಲ್ಲಾಧಿಕಾರಿಗಳು ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಿರುವ ಪ್ರಯುಕ್ತ ಆಯಾ ಜಿಲ್ಲೆಗಳ ವ್ಯಾಪ್ತಿಗೆ ಬರುವ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ **ದಿನಾಂಕ:13-08-2018ರಂದು** ನಡೆಯಬೇಕಿದ್ದ ಆಫ್-ಲೈನ್ ಪ್ರಥಮ ಡಿಪ್ಲೋಮಾ ಪ್ರವೇಶವನ್ನು ಸಾರ್ವಜನಿಕ ಹಿತದೃಷ್ಟಿಯ ಮೇರೆಗೆ **ದಿನಾಂಕ:14-08-2018ರಂದು** ನಡೆಸಲು ಸೂಚಿಸಿದೆ. ಪ್ರಯುಕ್ತ, ಆಯಾ ಜಿಲ್ಲೆಗಳ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಪುನಃ ಪ್ರವೇಶ ಅವಧಿಯನ್ನು ವಿಸ್ತರಿಸಲಾಗುವುದಿಲ್ಲ.

ಸಹಿ/-
**ನಿರ್ದೇಶಕರು**

| | |
|---|---|
| ಆಯಾ ಮಳೆ ಪೀಡಿತ ಜಿಲ್ಲೆಗಳ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ | - ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ಮೆರಿಟ್‌ಗನುಗುಣವಾಗಿ ತಮ್ಮ ಹಂತದಲ್ಲಿಯೇ **ದಿ:14-08-2018ರ** ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು. |

**ಪ್ರತಿ ಮಾಹಿತಿಗಾಗಿ:-**

1) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2) ಕಾರ್ಯದರ್ಶಿಗಳು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
3) ನಿರ್ದೇಶಕರ ಆಪ್ತಶಾಖೆಗೆ.
4) ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಪ್ರವೇಶಾಧಿಸೂಚನೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
5) ಕಡತಕ್ಕೆ.